**All India Radio: Bangalore**
**National Bulletin In Kannada**
**01.06.2026 1.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**01.06.2026 1.10 hrs**

**<>><><*><><<>**

ಮುಖ್ಯಾಂಶಗಳು

**೧. ನವದೆಹಲಿಯಲ್ಲಿ ಮ್ಯಾನ್ಮಾರ್ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ**

**೨. ಸುಪ್ರೀಂಕೋರ್ಟ್‌ಗೆ ಐವರು ನೂತನ ನ್ಯಾಯಮೂರ್ತಿಗಳ ನೇಮಕ ; ಸರ್ವೋಚ್ಚ ನ್ಯಾಯಾಲಯದ ಬಲ ೩೭ಕ್ಕೆ ಏರಿಕೆ**

**೩. ಭಾರತ-ಓಮನ್ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ ಇಂದಿನಿಂದ ಜಾರಿಗೆ**

**೪. ಜೆಇಇ ಅಡ್ವಾನ್ಸ್‌ಡ್ ಪರೀಕ್ಷೆ-೨೦೨೬ರ ಫಲಿತಾಂಶ ಪ್ರಕಟ ; ಪ್ರಥಮ ರ್‍ಯಾಂಕ್ ಪಡೆದ ದೆಹಲಿಯ ಶುಭಂ ಕುಮಾರ್**

**೫. ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆ ಏರಿಕೆ ; ಯಥಾಸ್ಥಿತಿಯಲ್ಲಿ ಗೃಹ ಬಳಕೆ ಎಲ್‌ಪಿಜಿ ಸಿಲಿಂಡರ್ ದರ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯಲ್ಲಿ ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಆಂಗ್ ಹ್ಲೈಂಗ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಉಭಯ ದೇಶಗಳ ನಡುವಿನ ಐತಿಹಾಸಿಕ ಮತ್ತು ನಾಗರಿಕ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಕುರಿತು ಚರ್ಚೆ ನಡೆಸಿದರು. ಮಾತುಕತೆಯ ಸಮಯದಲ್ಲಿ ಭದ್ರತೆ ಮತ್ತು ಸಂಪರ್ಕ ಸೇರಿದಂತೆ ಮ್ಯಾನ್ಮಾರ್ ಮತ್ತು ಭಾರತದ ನಡುವಿನ ಸಂಬಂಧಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಮ್ಯಾನ್ಮಾರ್ ಅಧ್ಯಕ್ಷರು ಇಂದು ಸಂಜೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ. ನಾಳೆ ಅವರು ವ್ಯಾಪಾರ ಮತ್ತು ಕೈಗಾರಿಕಾ ಸಂವಹನಕ್ಕಾಗಿ ಮುಂಬೈಗೆ ಪ್ರಯಾಣಿಸಲಿದ್ದಾರೆ.

**<>><><*><><<>**

ಭಾರತ-ಆಸ್ಟ್ರೇಲಿಯಾ ರಕ್ಷಣಾ ಸಚಿವರ ಸಭೆ ದೆಹಲಿಯಲ್ಲಿ ಇಂದು ನಡೆಯಲಿದ್ದು, ಸಚಿವ ರಾಜನಾಥ್ ಸಿಂಗ್ ಮತ್ತು ಆಸ್ಟ್ರೇಲಿಯಾ ರಕ್ಷಣಾ ಸಚಿವ ರಿಚರ್ಡ್ ಮಾರ್ಲೇಸ್ ಜಂಟಿ ಅಧ್ಯಕ್ಷತೆ ವಹಿಸಲಿದ್ದಾರೆ. ದ್ವಿಪಕ್ಷೀಯ ರಕ್ಷಣಾ ಮತ್ತು ಸೇನಾ ಸಹಕಾರ ಬಲವರ್ಧನೆ, ರಕ್ಷಣಾ ಕೈಗಾರಿಕಾ ಪಾಲುದಾರಿಕೆ, ರಕ್ಷಣಾ ಪರಿಕರಗಳ ಸಹ-ಅಭಿವೃದ್ಧಿ ಮತ್ತು ಸಹ- ಉತ್ಪಾದನೆ ಮತ್ತಿತರ ವಿಷಯಗಳ ಕುರಿತು ಸಮಾಲೋಚನೆ ನಡೆಯಲಿದೆ. ರಕ್ಷಣೆ ಮತ್ತು ಭದ್ರತಾ ವಲಯದಲ್ಲಿ ಬಾಂಧವ್ಯ ಬಲವರ್ಧನೆ, ಭಾರತ-ಫೆಸಿಫಿಕ್ ವಲಯದಲ್ಲಿ ಸುಸ್ಥಿರತೆ ಮತ್ತು ಭದ್ರತೆ ಬಲಪಡಿಸುವುದು ಸೇರಿದಂತೆ ಹಲವು ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

**<>><><*><><<>**

ಸುಪ್ರೀಂ ಕೋರ್ಟ್‌ಗೆ ಐವರು ನೂತನ ನ್ಯಾಯಮೂರ್ತಿಗಳನ್ನು ನೇಮಕ ಮಾಡಲಾಗಿದೆ. ಈ ಮೂಲಕ ಭಾರತದ ಮುಖ್ಯ ನ್ಯಾಯಮೂರ್ತಿ ಸೇರಿದಂತೆ ಸುಪ್ರೀಂ ಕೋರ್ಟ್‌ನ ಕಾರ್ಯನಿರ್ವಹಣಾ ಬಲ ೩೪ ಕ್ಕೆ ಏರಿಕೆಯಾಗಿದೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ, ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್, ಭಾರತದ ಮುಖ್ಯ ನ್ಯಾಯಮೂರ್ತಿಗಳೊಂದಿಗೆ ಸಮಾಲೋಚಿಸಿದ ನಂತರ ಸುಪ್ರೀಂ ಕೋರ್ಟ್‌ಗೆ ಐವರು ನೂತನ ನ್ಯಾಯಮೂರ್ತಿಗಳನ್ನು ರಾಷ್ಟ್ರಪತಿಗಳು ನೇಮಿಸಿದ್ದಾರೆ ಎಂದು ತಿಳಿಸಿದ್ದಾರೆ. ಕಾನೂನು ಸಚಿವಾಲಯ ಹೊರಡಿಸಿದ ಅಧಿಸೂಚನೆಗಳ ಪ್ರಕಾರ, ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಶೀಲ್ ನಾಗು, ಬಾಂಬೆ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಚಂದ್ರಶೇಖರ್, ಮಧ್ಯಪ್ರದೇಶ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಸಂಜೀವ್ ಸಚ್‌ದೇವ್ ಹಾಗೂ ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಅರುಣ್ ಪಲ್ಲಿ ಅವರನ್ನು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾಗಿ ಬಡ್ತಿ ನೀಡಲಾಗಿದೆ. ಹಿರಿಯ ವಕೀಲೆ ವೆಂಕಿತಾ ಸುಬ್ರಮಣಿ ಮೋಹನ ಅವರನ್ನು ಸಹ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾಗಿ ನೇಮಿಸಲಾಗಿದೆ.

**<>><><*><><<>**

ಭಾರತ-ಓಮನ್ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ-ಸಿಇಪಿಎ ಇಂದು ಜಾರಿಗೆ ಬಂದಿದೆ. ಸಿಇಪಿಎ- ಉಭಯ ರಾಷ್ಟ್ರಗಳ ನಡುವಿನ ಆರ್ಥಿಕ ಮತ್ತು ಕಾರ್ಯತಂತ್ರದ ಸಂಬಂಧಗಳನ್ನು ಇನ್ನಷ್ಟು ಬಲಪಡಿಸುತ್ತದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಈ ಒಪ್ಪಂದವು ಭಾರತದ ವಿದ್ಯಾರ್ಥಿಗಳು, ಕುಶಲಕರ್ಮಿಗಳು, ಮಹಿಳೆಯರು, ರೈತರು, ಮೀನುಗಾರರು ಮತ್ತು ಎಂಎಸ್‌ಎಂಇ ಗಳಿಗೆ ಹೊಸ ಮಾರುಕಟ್ಟೆಗಳನ್ನು

ತೆರೆಯುವ ಮೂಲಕ, ರಫ್ತುಗಳನ್ನು ಹೆಚ್ಚಿಸುವ ಮೂಲಕ, ಹೂಡಿಕೆಗಳನ್ನು ಆಕರ್ಷಿಸುವ ಮೂಲಕ ಮತ್ತು ಉದ್ಯೋಗ ಸೃಷ್ಟಿಯನ್ನು ವೇಗಗೊಳಿಸುವ ಮೂಲಕ ಗಮನಾರ್ಹವಾಗಿ ಪ್ರಯೋಜನವಾಗಲಿದೆ ಎಂದು ತಿಳಿಸಿದರು. ಭಾರತ ಆಳವಾದ ಆರ್ಥಿಕ ಮತ್ತು ಜನರಿಂದ ಜನರಿಗೆ ಸಂಪರ್ಕ ಹೊಂದಿದೆ. ಇದು ಸುಮಾರು ಏಳು ಲಕ್ಷ ಭಾರತೀಯರಿಗೆ ನೆಲೆಯಾಗಿದೆ. ಒಮನ್‌ನಿಂದ ಭಾರತೀಯ ಹಣಕಾಸು ರವಾನೆ ವಾರ್ಷಿಕವಾಗಿ ಸುಮಾರು ೨ ಶತಕೋಟಿ ಡಾಲರ್‌ಗಳಷ್ಟಿದೆ ಮತ್ತು ಆರು ಸಾವಿರಕ್ಕೂ ಹೆಚ್ಚು ಭಾರತೀಯ ಉದ್ಯಮಗಳು ಅಲ್ಲಿ ಕಾರ್ಯನಿರ್ವಹಿಸುತ್ತವೆ ಎಂದು ಕೇಂದ್ರ ಸಚಿವರು ಹೇಳಿದರು.

<>><><*><><<>

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ಮಧ್ಯಪ್ರದೇಶದ ರೈಸೆನ್ ಜಿಲ್ಲೆಯಿಂದ - ಖೇತ್ ಬಚಾವೋ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಒಂದು ತಿಂಗಳ ಈ ಅಭಿಯಾನ ಜೂನ್ ೩೦ ರವರೆಗೆ ನಡೆಯಲಿದ್ದು, ರಸಗೊಬ್ಬರಗಳ ಸಮತೋಲಿತ ಮತ್ತು ವಿವೇಚನಾಯುಕ್ತ ಬಳಕೆ, ಹವಾಮಾನ ಸಂಬಂಧಿತ ಸವಾಲುಗಳ ದೃಷ್ಟಿಯಿಂದ ರೈತರಿಗೆ ಸಕಾಲಿಕ ಸಲಹೆ, ಪಂಚಾಯತ್ ಮಟ್ಟದಲ್ಲಿ ಸಕ್ರಿಯ ಭಾಗವಹಿಸುವಿಕೆ ಮತ್ತು ಯೋಜನೆಗಳ ಪ್ರಯೋಜನಗಳನ್ನು ನೇರವಾಗಿ ಹಳ್ಳಿಗಳಿಗೆ ತಲುಪಿಸುವ ಗುರಿ ಹೊಂದಿದೆ.

<>><><*><><<>

ಜೆಇಇ ಅಡ್ವಾನ್ಸ್‌ಡ್ ಪರೀಕ್ಷೆ -೨೦೨೬ರ ಫಲಿತಾಂಶ ಪ್ರಕಟವಾಗಿದ್ದು, ದೆಹಲಿಯ ಶುಭಂ ಕುಮಾರ್ ಪ್ರಥಮ ರ್ಯಾಂಕ್ ಪಡೆದಿದ್ದಾರೆ. ೫೦ ಸಾವಿರದ ೮೮೦ ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಅರ್ಹತೆ ಪಡೆದಿದ್ದಾರೆ. ಈ ಪೈಕಿ ೧೦ ಸಾವಿರದ ೧೦೭ ಮಹಿಳಾ ಅಭ್ಯರ್ಥಿಗಳು. ಮೊದಲ ರ್ಯಾಂಕ್ ಪಡೆದ ಶುಭಂ ಕುಮಾರ್ ಒಟ್ಟು ೩೬೦ ಅಂಕಗಳಿಗೆ ೩೩೦ ಅಂಕಗಳನ್ನು ಪಡೆದಿದ್ದಾರೆ. ಮಹಿಳಾ ಅಭ್ಯರ್ಥಿಗಳ ಪೈಕಿ ದೆಹಲಿಯ ಅರೋಶಿ ದೇಶ್‌ಪಾಂಡೆ ಪ್ರಥಮರಾಗಿದ್ದು, ಇವರು ೭೭ನೇ ರ್ಯಾಂಕ್ ಪಡೆದಿದ್ದಾರೆ. ಒಟ್ಟು ೧ ಲಕ್ಷದ ೭೯ ಸಾವಿರದ ೬೯೪ ಅಭ್ಯರ್ಥಿಗಳು ಪರೀಕ್ಷೆ ಬರೆದಿದ್ದರು. ವಿದ್ಯಾರ್ಥಿಗಳು ತಮ್ಮ ಫಲಿತಾಂಶವನ್ನು ಅಧಿಕೃತ ಜಾಲತಾಣ ರಿeeಚಿಜv.ಚಿಛಿ.iಟಿ ನಲ್ಲಿ ಪರಿಶೀಲಿಸಬಹುದು.

<>><><*><><<>

ಹೋಟೇಲ್‌ಗಳು, ರೆಸ್ಟೋರೆಂಟ್‌ಗಳು ಮತ್ತು ಇತರೆಡೆ ಬಳಸುವ ೧೯ ಕೆ.ಜಿ. ತೂಕದ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ದೇಶದ ವಿವಿಧ ನಗರಗಳಲ್ಲಿ ೪೨ ರೂಪಾಯಿಗಳಿಂದ ೫೩.೫೦ ರೂಪಾಯಿಗಳಿಗೆ ಏರಿಕೆ ಮಾಡಲಾಗಿದೆ. ಆದರೆ ಗೃಹ ಬಳಕೆ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ

ಯಾವುದೇ ಬದಲಾವಣೆ ಇಲ್ಲ.  ದೆಹಲಿಯಲ್ಲಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ ೪೨ ರೂಪಾಯಿಗಳಷ್ಟು ಹೆಚ್ಚಿಸಲಾಗಿದ್ದು, ಪ್ರಸ್ತುತ ಬೆಲೆ ೩ ಸಾವಿರದ ೧೧೩ ರೂಪಾಯಿ ೫೦ ಪೈಸೆಯಷ್ಟಾಗಿದೆ. ಮುಂಬೈನಲ್ಲಿ ೪೩.೫ ರೂಪಾಯಿ ಏರಿಕೆ ಮಾಡಿದ್ದು, ಪ್ರಸ್ತುತ ೩ ಸಾವಿರದ ೬೭ ರೂಪಾಯಿ ೫೦ ಪೈಸೆಯಷ್ಟಾಗಿದೆ. ಕೊಲ್ಕತ್ತಾದಲ್ಲಿ ೫೩.೫ ರೂಪಾಯಿ ಹೆಚ್ಚಳದೊಂದಿಗೆ ವಾಣಿಜ್ಯ ಸಿಲಿಂಡರ್ ಬೆಲೆ ಈಗ ೩ ಸಾವಿರದ ೨೫೫ ರೂಪಾಯಿ ೫೦ ಪೈಸೆಯಷ್ಟಾಗಿದೆ. ಚೆನ್ನೈನಲ್ಲಿ ೪೨ ರೂಪಾಯಿ ಹೆಚ್ಚಳವಾಗಿದ್ದು, ಪ್ರಸ್ತುತ ದರ ೩ ಸಾವಿರದ ೨೮೩ ರೂಪಾಯಿಯಾಗಿದೆ. ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷದ ಹಿನ್ನೆಲೆಯಲ್ಲಿ ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಹೆಚ್ಚುತ್ತಿರುವ ಕಾರಣ ಇಂಧನ ವೆಚ್ಚಗಳು ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಇತ್ತೀಚೆಗೆ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಗಳಲ್ಲಿ ಏರಿಕೆ ಕಂಡುಬಂದಿದೆ. ಪಶ್ಚಿಮ ಏಷ್ಯಾದಿಂದ ವಿಶೇಷವಾಗಿ ಹಾರ್ಮುಜ್ ಜಲಸಂಧಿಯ ಮೂಲಕ ಆಮದು ಮಾಡಿಕೊಳ್ಳುವ ಕಚ್ಚಾತೈಲ ಮತ್ತು ಎಲ್‌ಪಿಜಿಯಲ್ಲಿನ ಅಡೆತಡೆಗಳು, ಇಂಧನ ಭದ್ರತೆ ಮತ್ತು ಬೆಲೆ ಸ್ಥಿರತೆ ಸವಾಲನ್ನು ಒಡ್ಡುತ್ತಿವೆ.

<>><><*><><<>

ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಸುವೇಂದು ಅಧಿಕಾರಿ ತಮ್ಮ ಸಚಿವ ಸಂಪುಟವನ್ನು ಇಂದು ವಿಸ್ತರಿಸಿದ್ದಾರೆ. ಲೋಕ ಭವನದಲ್ಲಿ ಇಂದು ನಡೆದ ಸಮಾರಂಭದಲ್ಲಿ ಮೂವತ್ತೈದು ನೂತನ ಸಚಿವರಿಗೆ ರಾಜ್ಯಪಾಲ ಎನ್.ಆರ್.ರವಿ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

<>><><*><><<>

ಪ್ರಧಾನ ಮಂತ್ರಿ ಸ್ವನಿಧಿ ಯೋಜನೆ ಇಂದು ಆರು ವರ್ಷಗಳನ್ನು ಪೂರೈಸಿದೆ.  ಪ್ರಧಾನ ಮಂತ್ರಿ ಸ್ವನಿಧಿಯು ಮೇಲಾಧಾರ ರಹಿತ ಸಾಲ, ಆರ್ಥಿಕ ಸೇರ್ಪಡೆ ಮತ್ತು ಬೆಳವಣಿಗೆಗೆ ಹೊಸ ಅವಕಾಶಗಳನ್ನು ಒದಗಿಸುವ ಮೂಲಕ ಅಸಂಖ್ಯಾತ ಬೀದಿ ವ್ಯಾಪಾರಿಗಳ ಜೀವನವನ್ನು ಪರಿವರ್ತಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

<>><><*><><<>

ವಿಯೆಟ್ನಾಂನ ಡಾ ನಾಂಗ್‌ನಲ್ಲಿ ನಡೆದ ೧೭ ವರ್ಷದೊಳಗಿನವರ ಏಷ್ಯನ್ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ, ಭಾರತದ ಮಹಿಳಾ ಕುಸ್ತಿಪಟುಗಳು ಪ್ರಬಲ ಪ್ರದರ್ಶನ ನೀಡುವ ಮೂಲಕ ೨ ಚಿನ್ನ, ೩ ಬೆಳ್ಳಿ ಮತ್ತು ೫ ಕಂಚು ಸೇರಿದಂತೆ ಒಟ್ಟು ೧೦ ಪದಕಗಳನ್ನು ಗೆದ್ದರು. ೪೩ ಕೆಜಿ ವಿಭಾಗದಲ್ಲಿ ದೀಕ್ಷಾ ಮತ್ತು ೭೩ ಕೆಜಿ ವಿಭಾಗದಲ್ಲಿ ಗರಿಮಾ ಆಯಾ ಫೈನಲ್‌ಗಳಲ್ಲಿ ಪ್ರಬಲ ಗೆಲುವುಗಳೊಂದಿಗೆ ಚಿನ್ನದ ಪದಕ ಗೆದ್ದರು. ೪೯ ಕೆಜಿ ವಿಭಾಗದಲ್ಲಿ ನಿಕಿತಾ, ೬೫ ಕೆಜಿ ವಿಭಾಗದಲ್ಲಿ

ಅಂತ್ರಾ ಮತ್ತು ೬೯ ಕೆಜಿ ವಿಭಾಗಗಳಲ್ಲಿ ತಾನಿಯಾ ಮೂಲಕ ಮೂರು ಬೆಳ್ಳಿ ಪದಕ ವಿಜೇತರಾದರು. ೪೦ ಕೆಜಿ ವಿಭಾಗದಲ್ಲಿ ಪಾಲಕ್, ೪೬ ಕೆಜಿ ವಿಭಾಗದಲ್ಲಿ ಅನಾಮಿಕಾ, ೫೩ ಕೆಜಿ ವಿಭಾಗದಲ್ಲಿ ಅಕ್ಷರ, ೫೭ ಕೆಜಿ ವಿಭಾಗದಲ್ಲಿ ಸಾಕ್ಷಿ ಮತ್ತು ೬೧ ಕೆಜಿ ವಿಭಾಗದಲ್ಲಿ ಮಾನ್ಯ ಕಂಚಿನ ಪದಕ ವಿಜೇತರಾದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**